# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯವನ್ನು ಒದಗಿಸಲು **(ಕಾಲೋನಿ ಅಭಿವೃದ್ಧಿ)** ಕ್ರಿಯಾ ಯೋಜನೆಯನ್ನು ರೂಪಿಸಿ, ಅನುಷ್ಠಾನಗೊಳಿಸಲು ಮಂಜೂರಾತಿ ನೀಡುವ ಕುರಿತು.

**ಓದಲಾಗಿದೆ:**
1. 2017-18ನೇ ಸಾಲಿನ ಆಯವ್ಯಯ ಭಾಷಣದ **ಕಂಡಿಕೆ-222.**
2. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 151 ಎಂಡಿಎಸ್ 2016 ದಿನಾಂಕ: 04-07-2017.
3. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 192 ಎಂಡಿಎಸ್ 2017 ದಿನಾಂಕ: 21-07-2017
4. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 257 ಎಂಡಿಎಸ್ 2018 ದಿನಾಂಕ: 06-04-2018
5. ಮಾನ್ಯ ಸಚಿವರು, ಆಹಾರ ಮತ್ತು ನಾಗರೀಕ ಸರಬರಾಜು ಗ್ರಾಹಕರ ವ್ಯವಹಾರಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರು ಇವರ ಟಿಪ್ಪಣಿ ಸಂಖ್ಯೆ: ಅನಾಸಗ್ರಾವ್ಯ/ ಅಕವಹಸ/ಸಿಆರ್/2105/2018, ದಿನಾಂಕ:02-11-2018

*~*~*~*~*

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು 2017-18 ನೇ ಸಾಲಿನ ಆಯುವ್ಯಯ ಭಾಷಣದ **ಕಂಡಿಕೆ-222ರಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿ** ವಾಸಿಸುವ **ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯವನ್ನು ಒದಗಿಸಲು ರೂ.800.00ಕೋಟಿಗಳ ಕ್ರಿಯಾ ಯೋಜನೆಯನ್ನು ರೂಪಿಸಿ, ಅನುಷ್ಠಾನಗೊಳಿಸಲಾಗುವುದೆಂದು** ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರಿ ಆದೇಶದಲ್ಲಿ ಅಲ್ಪಸಂಖ್ಯಾತರು ರಾಜ್ಯದ ಎಲ್ಲಾ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ, ನಗರವ್ಯಾಪ್ತಿಯಲ್ಲಿನ Notified & Non Notified ಕೊಳಚೆ ಪ್ರದೇಶದಲ್ಲಿ ವಾಸಿಸುತ್ತಿದ್ದು, ಪ್ರಮುಖ ಮೂಲ ಸೌಕರ್ಯಗಳಿಂದ ವಂಚಿತರಾಗಿರುವ ಸ್ಥಳಗಳಲ್ಲಿ ಇದೊಂದು ವಿಶೇಷ ಯೋಜನೆಯಡಿ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡು ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಸರ್ಕಾರಿ ಆದೇಶದಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಕಾಲೋನಿಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಮಾರ್ಗಸೂಚಿಗಳನ್ನು ರಚಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಸರ್ಕಾರಿ ಆದೇಶದಲ್ಲಿ 2018-19ನೇ ಸಾಲಿನಲ್ಲಿ ಈ ಯೋಜನೆಯನ್ನು ಮುಂದುವರೆಸಿ ಆದೇಶಿಸಿದೆ. ಈ ಯೋಜನೆಗೆ ಪ್ರಸಕ್ತ 2018-19ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ:4225-03-277-2-10(386) ರಡಿ ರೂ.400.00 ಕೋಟಿ ಅನುದಾನ ಮೀಸಲಿರಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ಟಿಪ್ಪಣಿಯಲ್ಲಿ ಮಾನ್ಯ ಇಲಾಖಾ ಸಚಿವರು ರಾಜ್ಯದ 224 ವಿಧಾನಾಸಭಾ ಕ್ಷೇತ್ರಗಳಲ್ಲಿ ಇರುವ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಅಭಿವೃದ್ಧಿ ಕಮಗಾರಿಗಳನ್ನು ಕೈಗೊಳ್ಳಲು ತಲಾ ರೂ.25.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಸೂಚಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರಿ ಆದೇಶ ಸಂಖ್ಯೆ:MWD 604 MDS 2018, ಬೆಂಗಳೂರು, ದಿನಾಂಕ: 03-11-2018.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಮಾನ್ಯ ಮುಖ್ಯಮಂತ್ರಿಗಳ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ ಅಲ್ಪಸಂಖ್ಯಾತರ ಸಮುದಾಯದ ಕಾಲೋನಿಗಳಲ್ಲಿ ಕೆಳಕಂಡ ಮೂಲಭೂತ ಸೌಕರ್ಯವನ್ನು ಕಲ್ಪಿಸಲು ರಾಜ್ಯದಲ್ಲಿನ ಒಟ್ಟು 224 ವಿಧಾನಸಭಾ ಕ್ಷೇತ್ರಗಳಿಗೆ ತಲಾ ರೂ.25.00ಲಕ್ಷಗಳ (ಇಪ್ಪತ್ತೈದು ಲಕ್ಷ ರೂಪಾಯಿಗಳು ಮಾತ್ರ) ಅನುದಾನವನ್ನು ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 192 ಎಂಡಿಎಸ್ 2017, ದಿನಾಂಕ:21-07-2017ರ ಮಾರ್ಗಸೂಚಿಗಳನ್ವಯ ಹಾಗೂ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

1. ರಸ್ತೆ ಮತ್ತು ಚರಂಡಿ/ ಒಳಚರಂಡಿ ನಿರ್ಮಾಣ.
2. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು.
3. ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು.
4. ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆಗೆ ಸ್ಥಳೀಯ ಸಂಸ್ಥೆಯ ಸುಪರ್ದಿಗೆ ನೀಡುವುದು)

## <u>ಷರತ್ತುಗಳು</u>

1. ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ ಸಿಖ್ ಮತ್ತು ಪಾರ್ಸಿ ಸಮುದಾಯದವರು ಶೇ.50%ರಷ್ಟು ವಾಸವಾಗಿರಬೇಕು.
2. ನಗರ ವ್ಯಾಪ್ತಿಯಲ್ಲಿನ Notified & Non-notified ಕೊಳಚೆ ಪ್ರದೇಶಗಳು ಹಾಗೂ ಗ್ರಾಮೀಣ ಪ್ರದೇಶದ ಅಲ್ಪಸಂಖ್ಯಾತರ ಸಮುದಾಯದ ಜನರು ವಾಸವಾಗಿರುವ ಕಾಲೋನಿ, ಕೇರಿ, ಮೊಹಲ್ಲಾ, ಮತ್ತು ಇತರೆ ಕೊಳಚೆ ಪ್ರದೇಶಗಳಿಗೆ ಆಧ್ಯತೆಯನ್ನು ನೀಡಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳತಕ್ಕದ್ದು.
3. ನಗರಾಭಿವೃದ್ಧಿ ಮತ್ತು ಗ್ರಾಮೀಣ ಅಭಿವೃದ್ಧಿ ಇಲಾಖೆ, ಸ್ಥಳೀಯ ಸಂಸ್ಥೆಗಳು, ಕೊಳಗೇರಿ ಅಭಿವೃದ್ಧಿ ಮಂಡಳಿ, ಹೈದರಾಬಾದ್-ಕರ್ನಾಟಕ ಅಭಿವೃದ್ಧಿ ಮಂಡಳಿ ಹಾಗೂ ಇತರೆ ಸರ್ಕಾರಿ ಇಲಾಖೆಗಳ ತೆಗೆದುಕೊಂಡಿರುವ ಕಾಮಗಾರಿಯನ್ನು ಪುನರಾವರ್ತನೆಯಾಗದಂತೆ ನೋಡಿಕೊಳ್ಳತಕ್ಕದ್ದು.

D/RM/BUDGET/2017/G.O